ದಿ:29.09.2022.

O.S 239-2021
PW-1

( ದಿ:**29/09/2022** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

**<u>ಪಿ.ಡಬ್ಲ್ಯೂ.1 ರವರ ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದ:</u>**

ನಾನು ಈ ಪ್ರಕರಣದಲ್ಲಿ **2** ನೇ ವಾದಿಯಾಗಿದ್ದು, ಈ ದಿನ ನನ್ನ ಮುಖ್ಯ ವಿಚಾರಣೆಯ ಹೇಳಿಕೆಯನ್ನು ಪ್ರಮಾಣ ಪತ್ರ ರೂಪದಲ್ಲಿ ಹಾಜರುಪಡಿಸಿದ್ದೇನೆ. ಅದರಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯ ಮತ್ತು ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿ, ಸಹಿ ಮಾಡಿರುತ್ತೇನೆ.

ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರು ಪಡಿಸಿದ್ದು, ಅದನ್ನು ನಿಪಿ–**1** ಎಂದು ಗುರುತಿಸಲಾಯಿತು, ದಾವಾ ಆಸ್ತಿಗೆ ಸಂಬಂಧಿಸಿದಂತೆ ಗ್ರಾಮ ನಮೂನೆ–**1** ರ ಎರಡು ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–**2** ಮತ್ತು ನಿಪಿ–**3** ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಿಸಿದಂತೆ **15** ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–**4** ರಿಂದ ನಿಪಿ–**18** ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂಧಿಸಿದಂತೆ ಎಂ.ಆರ್.ನಂ.ಹೆಚ್.**45/16–17** ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–**19** ಎಂದು ಗುರುತಿಸಲಾಯಿತು.

**ಮುಂದುವರಿದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು.**

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು,
ಹೊಳಲ್ಕೆರೆ.

ದಿಃ29.09.2022.